ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಪ್ರಸ್ತಾವದ ಅಂಗೀಕಾರ

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರ "ಹೌದು ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2. ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕ, 2011

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಪರಿಶೀಲನೆಗೆ ಪರಿಗಣಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 1983ರಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಆಯೋಗ ನೇಮಕವಾಯಿತು. ಆಗ ಯಾವ ಕಾನೂನು ಇರಲಿಲ್ಲ. 1994ರಲ್ಲಿ ಒಂದು ಕಾನೂನನ್ನು ರಚಿಸಲಾಯಿತು. ಈ ಕಾನೂನನ್ನು ಅಳವಡಿಸಿದಾಗ ಕೆಲವು ದೋಷಗಳು ಕಂಡುಬಂದವು. ಏನೂ ವಿದ್ಯೆ ಇಲ್ಲದಿದ್ದರೂ ಕೂಡ

ಸದಸ್ಯರಾಗಬಹುದು. ಅಲ್ಪಸಂಖ್ಯಾತರ ಆಯೋಗ ಮಹತ್ತರವಾದ ಜವಾಬ್ದಾರಿಯನ್ನು ವಹಿಸಕೊಳ್ಳಬೇಕಾಗಿದೆ. ಸಂವಿಧಾನದಲ್ಲಿ ಕಂಡುಬರುವ ಮೂಲಭೂತ ಹಕ್ಕುಗಳನ್ನು ಅವರು ತಿಳಿದುಕೊಳ್ಳಬೇಕು ಇವುಗಳನ್ನೆಲ್ಲ ಅನುಷ್ಠಾನಕ್ಕೆ ತರಬೇಕು. ಇದೇ ರೀತಿ ಅನೇಕ ಕಾನೂನುಗಳು ಅಲ್ಪಸಂಖ್ಯಾತರ ಪರವಾಗಿ ಇವೆ. ಈ ಕಾನೂನುಗಳ ಅರಿವು ಕೂಡ ಅವರಿಗೆ ಇರಬೇಕು. ಆದ್ದರಿಂದ, ವಿದ್ಯಾವಂತರು ಬೇಕೆಂದು ನಾವು ಪ್ರತಿಯೊಬ್ಬ ಸದಸ್ಯರು ಕನಿಷ್ಠ ಪಕ್ಷ ಪದವೀಧರರಾಗಿರಬೇಕೆನ್ನುವುದನ್ನು ತಂದಿದ್ದೇವೆ. ಎರಡನೆಯದಾಗಿ, ಈಗ ಅಲ್ಪಸಂಖ್ಯಾತರಲ್ಲಿ ಅನೇಕ ಗುಂಪುಗಳಿವೆ. ಮುಸಲ್ಮಾನರು, ಕ್ರೈಸ್ತರು, ಜೈನರು, ಬೌದ್ಧರಿದ್ದಾರೆ. ಒಂದು ವೇಳೆ ನಾಲ್ಕೈದು ಜನ ಒಂದೇ ಗುಂಪಿನವರು ಬರಬಹುದು. ಆಗ ಉಳಿದವರಿಗೆ ಅನ್ಯಾಯವಾಗಿಬಿಡುತ್ತದೆ. ಬೌದ್ಧರಿಗೆ ಕೊಡದಿರಬಹುದು, ಕ್ರೈಸ್ತರಿಗೆ ಕೊಡದೇ ಇರಬಹುದು, ಜೈನರಿಗೆ ಕೊಡದೇ ಇರಬಹುದು. ಸಾಮಾಜಿಕ ನ್ಯಾಯವನ್ನು ಒದಗಿಸಿ ಎಲ್ಲಾ ಗುಂಪಿನವರಿಗೆ ಕೊಡಲಿಕ್ಕೋಸ್ಕರ ಪ್ರತಿಯೊಂದು ಸಮುದಾಯದಿಂದಲೂ ಕೂಡ ಕನಿಷ್ಠ ಪಕ್ಷ ಒಬ್ಬ ಸದಸ್ಯರಿರಬೇಕೆಂದು ಈ ತಿದ್ದುಪಡಿಯನ್ನು ತಂದಿದ್ದೇವೆ. ಮೂರನೆಯದಾಗಿ, ಸಂಬಳದ ವಿಷಯ. ಅಧ್ಯಕ್ಷರಿಗೆ ಸಂಬಳ ಮತ್ತು ಭತ್ಯೆ ಕೊಡಲಿಕ್ಕೆ ಏನೂ ಅಡ್ಡಿಯಿಲ್ಲ. ಆದರೆ, ಸದಸ್ಯರೂ ಕೂಡ ಸಂಬಳ ಕೇಳುತ್ತಿದ್ದಾರೆ. ಇವರಿಗೆ ಅಷ್ಟೊಂದು ಜಾಸ್ತಿ ಕಾರ್ಯ ಇರುವುದಿಲ್ಲ. ಸದಾ ಕಾಲ ಅವರು ಕೆಲಸ ಮಾಡುತ್ತಿಲ್ಲ. High Court ಗೆ ಹೋಗಿ ಕೇವಲ ಕಾನೂನಿನಲ್ಲಿ ಸಂಬಳ ಕೊಡಬೇಕೆಂದಿದೆ ಎಂದು ಹೇಳಿ ಕಳೆದ ವರ್ಷ 45 ಲಕ್ಷ ರೂ.ಗಳನ್ನು ಕೊಡಲೇಬೇಕಾಯಿತು. ಈಗಿರುವ ಕೆಲವು ಸದಸ್ಯರು ಕೋರ್ಟಿಗೆ ಹೋಗಿದ್ದಾರೆ. ಈ ಅವಾಂತರವನ್ನು ತಪ್ಪಿಸಲಿಕ್ಕೆ ಸಂಬಳವನ್ನು ಕೇವಲ ಅಧ್ಯಕ್ಷರಿಗೆ ಕೊಡುತ್ತೇವೆಯೇ ವಿನಾ ಸದಸ್ಯರಿಗೆ ಸಂಬಳ ಕೊಡುವುದಿಲ್ಲ, ಅವರಿಗೆ ಭತ್ಯೆಯನ್ನು ಕೊಡುತ್ತೇವೆ. ನಾಲ್ಕನೆಯದಾಗಿ ನಮ್ಮ ಅಧಿಕಾರಿ ಈಗ ಉಪಕಾರ್ಯದರ್ಶಿ ಇರಬೇಕೆಂದು ಮಾಡಿದ್ದೇವೆ. ಜಂಟಿ ಕಾರ್ಯದರ್ಶಿ ಮಟ್ಟದ ಅಧಿಕಾರಿ ಒಮ್ಮೊಮ್ಮೆ ಸಿಗುವುದಿಲ್ಲ. ಆದ್ದರಿಂದ, ಕನಿಷ್ಠ ಪಕ್ಷ ಉಪ ಕಾರ್ಯದರ್ಶಿ ಇರಲಿ ಎಂದು ತಿದ್ದುಪಡಿ ತಂದಿದ್ದೇವೆ. ವಾಸ್ತವವಾಗಿ ಇದನ್ನು ಅನುಷ್ಠಾನಕ್ಕೆ ತರಲು ಸುಲಭವಾಗುತ್ತದೆ. ಈ ನಾಲ್ಕು ಪ್ರಮುಖವಾದ ಕಾರಣಗಳಿಗೋಸ್ಕರ ತಿದ್ದುಪಡಿಯನ್ನು ತಂದಿದ್ದೇವೆ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯ ಪರಿಶೀಲನೆಗೆ ತೆಗೆದುಕೊಳ್ಳುವ ವಿಷಯ ಸಭೆಯ ಮುಂದಿದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಖಂಡ 2 ರಿಂದ 5

ಅಧ್ಯಕ್ಷರು: ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

2 ಮತ್ತು 5ರ ವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕೆನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2 ಮತ್ತು 5ರ ವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಿರಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಪ್ರಸ್ತಾವದ ಅಂಗೀಕಾರ

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

3. ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2011

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ಈ ಪಂಚಾಯತ್ ರಾಜ್ ವಿಧೇಯಕದ ತಿದ್ದುಪಡಿಗೆ ಮುಖ್ಯ ಕಾರಣವೇನೆಂದರೆ, supreme court Writ Petition No.356/94 Krishna Murthy vs. Government of India ಪ್ರಕರಣದಲ್ಲಿ ಆದಂಥ ತೀರ್ಪಿನ ಅನ್ವಯ ಅದನ್ನು ಜಾರಿಗೊಳಿಸುವ ಸಲುವಾಗಿ ಈ ತಿದ್ದುಪಡಿ ತರುತ್ತಿದ್ದೇವೆ. ಕೇಂದ್ರದ 13ನೇ ಹಣಕಾಸು ಆಯೋಗ